## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಚಳ್ಳಕೆರೆ.

## ಸಿ.ಸಿ. ನಂ. 2126/2021

ಪ್ರಮಾಣ ವಚನ ಬೋಧಿಸಲಾಯಿತು.

| | | | |
|---|---|---|---|
| ಹೆಸರು | : | ಶಂಕರಮೂರ್ತಿ | ಸಿ.ಡಬ್ಲ್ಯೂ–3 |
| ತಂದೆಯ ಹೆಸರು | : | ತಿಪ್ಪೇಸ್ವಾಮಿ | ಪಿ.ಡಬ್ಲ್ಯೂ–7 |
| ವಯಸ್ಸು | : | 53 ವರ್ಷ | |
| ಉದ್ಯೋಗ | : | ವ್ಯವಸಾಯ | |
| ವಾಸಸ್ಥಳ | : | ವರವು ಗ್ರಾಮ | ದಿಃ 02–04–2026. |

### ಮುಖ್ಯ ವಿಚಾರಣೆ: ಮಾನ್ಯ ಎ.ಪಿ.ಪಿ. ರವರಿಂದಃ

ಸಾಕ್ಷಿಗೆ ನಿಪಿಃ2 ರ ದಾಖಲೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿಃ2(ಸಿ) ಅಂತ ಗುರುತಿಸಲಾಯಿತು. ಸದರಿ ಸಹಿಯನ್ನು ಈಗ್ಗೆ 6 ವರ್ಷಗಳ ಹಿಂದೆ ಚಳ್ಳಕೆರೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ಪೊಲೀಸರು ನನ್ನನ್ನು ಎಲ್ಲಿಯೂ ಕರೆದುಕೊಂಡು ಹೋಗಿರುವುದಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಕ್ರಮ ಜರುಗಿಸಿರುವುದಿಲ್ಲ. ನಿಪಿ.2 ಕ್ಕೆ ನನ್ನ ಜೊತೆ ಬೇರೆ ಯಾರು ಸಹಿ ಯನ್ನು ಮಾಡಿರುವುದಿಲ್ಲ

**(ಈ ಹಂತದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು, ಸದರಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗಾಗಿ ಅನುಮತಿ ಕೋರಿರುತ್ತಾರೆ, ಸಾಕ್ಷಿಯ ಹೇಳಿಕೆ ಹಾಗೂ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)**

### ಪಾಟೀ ಸವಾಲು ಮಾನ್ಯ ಎ.ಪಿ.ಪಿ. ರವರಿಂದಃ

ದಿನಾಂಕ 15.11.2019 ರಂದು ಬಿ ಎಂ ಜಿ ಹೆಚ್ ಎಸ್ ಶಾಲಾ ಮುಂಭಾಗ ಅಪಘಾತ ಸ್ಥಳದಲ್ಲಿ ಮಹಜರ್ ಕ್ರಮ ಜರುಗಿಸಿಸಲು ನನ್ನನ್ನು ಹಾಗೂ ಚಾಸಾ–4 ವರನ್ನು ಕರೆಸಿದ್ದರು ಎಂದರೆ ಸರಿಯಲ್ಲ. ಚಾಸಾ1 ರವರು ಸ್ಥಳ ತೋರಿಸಿದ ಮೇರೆಗೆ ಮದ್ಯಾಹ್ಹ 11.30 ರಿಂದ 11.45 ರವರೆಗೆ ನಿಪಿ.2 ರಂತೆ ಸ್ಥಳ ಪಂಚನಾಮೆ ಜರುಗಿಸಿ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಅಪಘಾತ ಸ್ಥಳದಲ್ಲಿ ಮಹಜರ್ ಮಾಡಿದಾಗ ನಾನು, ಚಾಸಾ–1 ಮತ್ತು ಚಾಸಾ–4 ರವರು ಸಹಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ಮಹಜರ್ ಸಮಯದಲ್ಲಿ ಭಾವಚಿತ್ರ ತೆಗೆಯಲಾಗಿರುತ್ತದೆ ಎಂದರೆ ಸರಿಯಲ್ಲ.

ನನಗೆ ಪ್ರಕರಣದ ಕುರಿತು ಸಂಪೂರ್ಣ ಮಾಹಿತಿ ಇದ್ದರೂ ಕೂಡ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಶ್ರೀ ಸಿ.ವಿ., ಆರೋಪಿ ಪರ ವಕೀಲರಿಂದಃ**

ಆರೋಪಿಯ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ನುಡಿದ ಕಾರಣ ಸದರಿ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸರಿಯಿದೆ,

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ